ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್.-2024: ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯ ವರ್ಗದಲ್ಲಿ 19ನೇ ಸ್ಥಾನ, ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 03.01.2025

ಸಂಖ್ಯೆ:ಜಿಎಲ್5/277/2023-24

## ಸು ತ್ತೋ ಲೆ

ವಿಷಯ: "ಬೆಳಗಾವಿ ಅಧಿವೇಶನದಲ್ಲಿ ಮಹಾತ್ಮ ಗಾಂಧೀಜಿಯವರ ಸಂದೇಶ: ಚಾರಿತ್ರಿಕ ಮಹತ್ವ" ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ.

ಉಲ್ಲೇಖ: 1) ನಿರ್ದೇಶಕರು, ಗಾಂಧಿ ಅಧ್ಯಯನ ಕೇಂದ್ರ, ಗಾಂಧಿಭವನ, ಮಾನಸಗಂಗೋತ್ರಿ, ಮೈಸೂರು ಇವರ ಪತ್ರ ಸಂಖ್ಯೆ: ಜಿಬಿ/ಎಂಜಿಎಂ/295/2024-25, ದಿನಾಂಕ: 01.01.2025

2) ಈ ಕಛೇರಿ ಸುತ್ತೋಲೆ ಸಂಖ್ಯೆ:ಜಿಎಲ್.5/277/2023-24, ದಿನಾಂಕ:26-12-2024

3) ನಿರ್ದೇಶಕರು, ಗಾಂಧಿ ಅಧ್ಯಯನ ಕೇಂದ್ರ, ಗಾಂಧಿಭವನ, ಮಾನಸಗಂಗೋತ್ರಿ, ಮೈಸೂರು ಇವರ ಪತ್ರ ಸಂಖ್ಯೆ: ಜಿಬಿ/ಎಂಜಿಎಂ/287/2024-25, ದಿನಾಂಕ: 24-12-2024.

***

ದಿನಾಂಕ:27-12-2024ರಂದು "ಬೆಳಗಾವಿ ಅಧಿವೇಶನದಲ್ಲಿ ಮಹಾತ್ಮ ಗಾಂಧೀಜಿಯವರ ಸಂದೇಶ: ಚಾರಿತ್ರಿಕ ಮಹತ್ವ" ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉಲ್ಲೇಖ (2) ರ ಅನ್ವಯ ಹಮ್ಮಿಕೊಳ್ಳಲಾಗಿತ್ತು. ಆದರೆ ದಿನಾಂಕ:26-12-2024ರಂದು ಭಾರತದ ಮಾಜಿ ಪ್ರಧಾನ ಮಂತ್ರಿಗಳಾದ ಡಾ.ಮನಮೋಹನ್ ಸಿಂಗ್ ರವರು ನಿಧನರಾದ ಕಾರಣ ಗೌರವಾರ್ಥವಾಗಿ ವಿಶ್ವವಿದ್ಯಾನಿಲಯವು ರಜೆ ಘೋಷಣೆ ಮಾಡಿರುವುದರಿಂದ ಕಾರ್ಯಕ್ರಮವನ್ನು ರದ್ದುಪಡಿಸಲಾಗಿತ್ತು. ಈ ಸಂಬಂಧ ಸದರಿ ಕಾರ್ಯಕ್ರಮವನ್ನು ದಿನಾಂಕ: 04-01-2025ರಂದು ಬೆಳಗ್ಗೆ10.30 ಗಂಟೆಗೆ ಮಾನಸಗಂಗೋತ್ರಿಯ ಗಾಂಧೀ ಭವನದ ಸಭಾಂಗಣದಲ್ಲಿ "ಬೆಳಗಾವಿ ಅಧಿವೇಶನದಲ್ಲಿ ಮಹಾತ್ಮಗಾಂಧೀಜಿಯವರ ಸಂದೇಶ: ಚಾರಿತ್ರಿಕ ಮಹತ್ವ "ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಮಾನ್ಯ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಈ ಸಂಬಂಧ ಸಾಮಾಜಿಕ ಕಾರ್ಯಕರ್ತರಾದ ಶ್ರೀ ಸಂತೋಷ್ ಕೌಲಗಿ ಇವರು ಉದ್ಘಾಟಿಸುವುದರ ಜೊತೆಗೆ ವಿಶೇಷ ಉಪನ್ಯಾಸ ನೀಡಲಿದ್ದಾರೆ.ಕಾರ್ಯಕ್ರಮದಲ್ಲಿ ಗಾಂಧಿಪರ ಚಿಂತಕರು, ಗಾಂಧಿಮಾರ್ಗಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವುದರಿಂದ ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳ ಅಧ್ಯಾಪಕರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಲು ಅನುಮತಿ ನೀಡಲಾಗಿದೆ.

**ಸೂಚನೆ:-** ಕಾರ್ಯಕ್ರಮ ಮುಗಿದ ನಂತರ ಕಛೇರಿ/ವಿಭಾಗಗಳಿಗೆ ತೆರಳುವುದು.

Roopa P. R 03/01/2025
ಸಹಾಯಕ ಕುಲಸಚಿವ(ಸಾಮಾನ್ಯ)
ಸಹಾಯಕ ಕುಲಸಚಿವ (ಸಾಮಾನ್ಯ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ಎಲ್ಲಾ ಸ್ನಾತಕೊತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ ನಿರ್ದೇಶಕರು, ಮಾನಸಗಂಗೋತ್ರಿ, ಮೈಸೂರು
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿವಿ, ಮೈಸೂರು.
3. ನಿರ್ದೇಶಕರು, ಮಾಹಿತಿ ಮತ್ತು ಸಂವಹನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸದರಿ ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
4. ಮಾನ್ಯ ಕುಲಪತಿ/ಕುಲಸಚಿವರ ಆಪ್ತಸಹಾಯಕರು, ಮೈವಿವಿ, ಮೈಸೂರು.
5. ಕಛೇರಿ ಪ್ರತಿ.

Scanned with OKEN Scanner